# ತುಮಕೂರು ವಿಶ್ವವಿದ್ಯಾನಿಲಯ

**ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103☎:0816-2255650, 2273511,ಫ್ಯಾಕ್ಸ್ :0816-2270719**


ಸಂಖ್ಯೆ : ತು.ವಿ.: ಪ.ವಿ.ಛಾ.ಮೌ:2025-26/579. **ದಿನಾಂಕ: 16.10.2025**

## : ಅಧಿಸೂಚನೆ :

**ವಿಷಯ: 2025ರ ಜುಲೈ/ಆಗಸ್ಟ್ ಮಾಹೆಗಳಲ್ಲಿ ನಡೆದ ವಿವಿಧ ಸ್ನಾತಕೋತ್ತರ ಪದವಿಯ ದ್ವಿತೀಯ ಮತ್ತು ನಾಲ್ಕನೇ (ನವೀನ ಮತ್ತು ಪೂರಕ) ಸೆಮಿಸ್ಟರ್ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಛಾಲೆಂಜ್ ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವ ಕುರಿತು.**

ಉಲ್ಲೇಖ: 1. ಈ ಕಚೇರಿ ಅಧಿಸೂಚನೆ ಸಂಖ್ಯೆ :ತು.ವಿ.: ಪ.ವಿ.:2025-26/365 ದಿನಾಂಕ: 14.07.2025

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 15.10.2025 (ಕಂಡಿಕೆ-18, ಪು.ಸಂ-05)

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಅಧಿಸೂಚನೆಯಲ್ಲಿ **2025ರ ಜುಲೈ/ಆಗಸ್ಟ್** ಮಾಹೆಗಳಲ್ಲಿ ನಡೆದ ವಿವಿಧ ಸ್ನಾತಕೋತ್ತರ ಪದವಿಯ **ದ್ವಿತೀಯ ಮತ್ತು ನಾಲ್ಕನೇ ಸೆಮಿಸ್ಟರ್ (ನವೀನ ಮತ್ತು ಪೂರಕ)** ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಈಗಾಗಲೇ ಫಲಿತಾಂಶ ಪ್ರಕಟಿಸಿದ (ಎಂ.ಸಿ.ಎ, ಎಂ.ಬಿ.ಎ **ಎಂ.ಬಿ.ಎ ಫೈನಾನ್ಸ್ ಹಾಗೂ ಎಲ್‌ಎಲ್.ಎಂ ಹೊರತುಪಡಿಸಿ**) ಎಲ್ಲಾ ವಿಷಯಗಳ ಉತ್ತರ ಪತ್ರಿಕೆಗಳ ಛಾಲೆಂಜ್ ಮೌಲ್ಯಮಾಪನಕ್ಕೆ ಯು.ಯು.ಸಿ.ಎಂ.ಎಸ್ ತಂತ್ರಾಂಶದ ಮುಖಾಂತರ ಅವಕಾಶ ಕಲ್ಪಿಸಲಾಗಿದೆ. ವಿದ್ಯಾರ್ಥಿಗಳು ಸಂಬಂಧಪಟ್ಟ ವಿಭಾಗಗಳಲ್ಲಿ/ಕಾಲೇಜುಗಳಲ್ಲಿ ವಿಭಾಗದ ಮುಖ್ಯಸ್ಥರು/ಪ್ರಾಂಶುಪಾಲರ ಮುಖಾಂತರ **ಯು.ಯು.ಸಿ.ಎಂ.ಎಸ್** ತಂತ್ರಾಂಶದ ಮುಖಾಂತರ ವಿದ್ಯಾರ್ಥಿಗಳ ಲಾಗಿನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಸದರಿ ಪ್ರತಿಯನ್ನು ವಿಭಾಗ/ ಕಾಲೇಜಿಗೆ ಸಲ್ಲಿಸುವುದು. **ಸದರಿ ಮಾಹಿತಿಯನ್ನು ಈ ಕೆಳಗೆ ನೀಡಿದ ದಿನಾಂಕದೊಳಗೆ ಕುಲಸಚಿವರು (ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರಿಗೆ ಕಡ್ಡಾಯವಾಗಿ ಸಲ್ಲಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ.**

| | |
|---|---|
| **ಛಾಲೆಂಜ್ ಮೌಲ್ಯಮಾಪನದ ಶುಲ್ಕ ಪ್ರತಿ ವಿಷಯಕ್ಕೆ (Per Paper)** | **ರೂ.1,310-00** |
| ವಿದ್ಯಾರ್ಥಿಗಳು ಛಾಲೆಂಜ್ ಮೌಲ್ಯಮಾಪನಕ್ಕೆ ಯು.ಯು.ಸಿ.ಎಂ.ಎಸ್ ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ | **27.10.2025** |
| ಛಾಲೆಂಜ್ ಮೌಲ್ಯಮಾಪನಕ್ಕೆ ಸಲ್ಲಿಸಿದ ಅರ್ಜಿಗಳ ವಿವರಗಳನ್ನು ವಿಭಾಗ/ಕಾಲೇಜಿನವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕಡೆಯ ದಿನಾಂಕ | **28.10.2025** |

**ವಿಶೇಷ ಸೂಚನೆ:-**

- ಎಲ್ಲಾ ವಿದ್ಯಾರ್ಥಿಗಳು ಯು.ಯು.ಸಿ.ಎಂ.ಎಸ್ ತಂತ್ರಾಂಶದ ಮುಖಾಂತರ ವಿದ್ಯಾರ್ಥಿಗಳ ಲಾಗಿನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಸದರಿ ಪ್ರತಿಯನ್ನು ವಿಭಾಗ/ಕಾಲೇಜುಗಳಿಗೆ ಸಲ್ಲಿಸುವುದು.
- ಛಾಲೆಂಜ್ ಮೌಲ್ಯಮಾಪನದಲ್ಲಿ ಪಡೆದ ಅಂಕಗಳೇ ಅಂತಿಮವಾಗಿರುತ್ತದೆ ಕಡೆಯ ದಿನಾಂಕದ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.

16/10/25

ಕುಲಸಚಿವರು(ಪರೀಕ್ಷಾಂಗ)

ಕುಲಸಚಿವರು (ಮೌಲ್ಯಮಾಪನ)

ಗೆ,

ನಿರ್ದೇಶಕರು/ ಮುಖ್ಯಸ್ಥರು/ಸಂಯೋಜಕರು/ಪ್ರಾಂಶುಪಾಲರು/ವಿವಿಧ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು ಮತ್ತು ವಿವಿಧ ಸ್ನಾತಕೋತ್ತರ ಸಂಯೋಜಿತ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಿಸ್ಟಂ ಅನಾಲಿಸಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. ಇಂದೇ ಅಂತರ್ಜಾಲದಲ್ಲಿ ಪ್ರಕಟಿಸುವುದು.
4. ಕಛೇರಿ ಪ್ರತಿ.